ಅಸಲು ದಾವಾ ಸಂಖ್ಯೆ - 229/2021
ಪಿಡಬ್ಲ್ಯೂ - 01
ದಿನಾಂಕಃ 26-07-2024
ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಸಿ ಎಸ್ ಎಂ ವಕೀಲರಿಂದಃ**

ಈ ದಾವೆಯಲ್ಲಿ ನಾನು ವಾದಿಯಾಗಿದ್ದು, ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ಮಾದಾಪುರ ಗ್ರಾಮದ ಸರ್ವೇ ನಂಬರ 47/3 ರ 2021-22 ನೇ ಸಾಲಿನ ಉತಾರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 1 ಎಂದು ಗುರುತಿಸಲಾಯಿತು.

ಹುಲುಗುರು ಗ್ರಾಮದ ಆಸ್ತಿ ನಂಬರ 491/1 ರ 2011-12 ನೇ ಸಾಲಿನ ಭೂಮಿ ಕರ ಆಕರಣೆ ಯಾದಿಯ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 2 ಎಂದು ಗುರುತಿಸಲಾಯಿತು.

ಆರ್.ಎ-137/2012 ರ ಆದೇಶದ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 3 ಎಂದು ಗುರುತಿಸಲಾಯಿತು.

ವಾದಿಯ ತಾಯಿಯ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 4 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು.ಸವಣೂರು